ದೂರವಾಣಿ ಸಂಖ್ಯೆ: 2419222 / 2419361
ಫ್ಯಾಕ್ಸ್: 0821-2419301 / 2419363

e-mail : registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ 1916

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ 406
ಮೈಸೂರು-570 005

ದಿನಾಂಕ: 20-09-2025

ಸಂಖ್ಯೆ: ಶಾಎಲ್13/110/2022-23

## ಸುತ್ತೋಲೆ

ವಿಷಯ: ರಾಷ್ಟ್ರ ಕವಿ ಕುವೆಂಪು ವಿರಚಿತ ನಾಡಗೀತೆಗೆ "ನೂರರ ಸಂಭ್ರಮ ಸಾವಿರಾರು ಸ್ವರಗಳ ಸಂಗಮ" ಕಾರ್ಯಕ್ರಮವನ್ನು ಆಯೋಜಿಸುತ್ತಿರುವ ಬಗ್ಗೆ.

ಉಲ್ಲೇಖ: ನಿರ್ದೇಶಕರು, ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ ಇವರ ಪತ್ರ ದಿನಾಂಕ: 20.09.2025

****

ಮೈಸೂರು ದಸರಾ ಕವಿಗೋಷ್ಠಿ ಮತ್ತು ಮೈಸೂರು ವಿಶ್ವವಿದ್ಯಾನಿಲಯದ ಸಹಯೋಗದಲ್ಲಿ ಆಯೋಜಿಸಲಾಗಿರುವ ಕವಿಗೋಷ್ಠಿಯ ಉದ್ಘಾಟನಾ ಕಾರ್ಯಕ್ರಮದಲ್ಲಿ **'ರಾಷ್ಟ್ರಕವಿ ಕುವೆಂಪು ವಿರಚಿತ ನಾಡಗೀತೆಯ ನೂರರ ಸಂಭ್ರಮ'** ಆಚರಣೆ ಅಂಗವಾಗಿ, ಸುಮಾರು 15 ಸಾವಿರ ಧ್ವನಿಗಳಿಂದ ಏಕಕಾಲದಲ್ಲಿ ನಾಡಗೀತೆಯನ್ನು ಹಾಡುವ ದಾಖಲೆಯ ಕಾರ್ಯಕ್ರಮವನ್ನು **ದಿನಾಂಕ: 23-09-2025ರಂದು ಬೆಳಿಗ್ಗೆ 9.30ಕ್ಕೆ** ಮಾನಸ ಗಂಗೋತ್ರಿಯ ಬಯಲುರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದ್ದು, ಈ ಕಾರ್ಯಕ್ರಮಕ್ಕೆ ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಗಣ್ಯಾತಿಗಣ್ಯರು ಆಗಮಿಸುತ್ತಿದ್ದಾರೆ.

ಈ ಕಾರ್ಯಕ್ರಮಕ್ಕೆ ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಒಳಪಡುವ ಎಲ್ಲಾ ಅಧ್ಯಯನ ವಿಭಾಗಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ/ತಾತ್ಕಾಲಿಕ ಬೋಧಕರು, ಬೋಧಕೇತರರು, ಅತಿಥಿ ಉಪನ್ಯಾಸಕರು, ಸಂಶೋಧನಾ ವಿದ್ಯಾರ್ಥಿಗಳು ಹಾಗೂ ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಕಡ್ಡಾಯವಾಗಿ ಭಾಗವಹಿಸಿ ಗೌರವ ಸಲ್ಲಿಸುವುದು ಎಲ್ಲರ ಆದ್ಯ ಕರ್ತವ್ಯವಾಗಿರುತ್ತದೆ.

ಈ ಹಿನ್ನೆಲೆಯಲ್ಲಿ ಈ ಕಾರ್ಯಕ್ರಮಕ್ಕೆ ಹಾಜರಾತಿಯನ್ನು ಕಡ್ಡಾಯಗೊಳಿಸಲಾಗಿದ್ದು, ರಾಜ್ಯ ಸರ್ಕಾರ ಅಧಿಕೃತವಾಗಿ ಘೋಷಿಸಿರುವ ನಾಡಗೀತೆಯನ್ನು ತಮ್ಮ ವಿಭಾಗದ ವಿದ್ಯಾರ್ಥಿಗಳೊಂದಿಗೆ ಅಭ್ಯಾಸ ಮಾಡಿಕೊಂಡು ತಾವೆಲ್ಲರೂ ತಂಡವಾಗಿ ಈ ಕಾರ್ಯಕ್ರಮಕ್ಕೆ ಕಡ್ಡಾಯವಾಗಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ತಿಳಿಸಲಾಗಿದೆ.

ವಿಶೇಷ ಸೂಚನೆ:

- ಎಲ್ಲಾ ವಿಭಾಗಗಳ ಬೋಧಕ ವರ್ಗದವರು ತಮ್ಮ ವಿಭಾಗಗಳಲ್ಲಿರುವ ವಿದ್ಯಾರ್ಥಿಗಳು, ಸಂಶೋಧನಾ ವಿದ್ಯಾರ್ಥಿಗಳು ನಾಡಗೀತೆಯನ್ನು ಹಾಡಲು ಅಭ್ಯಾಸದೊಂದಿಗೆ ಸಿದ್ಧತೆ ಮಾಡಿಕೊಂಡು ತಂಡವಾಗಿ ಭಾಗವಹಿಸಲು ಆಯಾ ವಿಭಾಗಗಳ ಅಧ್ಯಕ್ಷರು ಮತ್ತು ಮುಖ್ಯಸ್ಥರಿಗೆ ಸಹಕರಿಸುವುದು.
- ಕನ್ನಡ ಬಾವುಟವನ್ನು ಸಾಂಕೇತಿಸುವ ಸಲುವಾಗಿ ಮಹಿಳೆಯರು ಕೆಂಪು ಅಥವಾ ಹಳದಿ ಬಣ್ಣದ ಸಾಂಪ್ರದಾಯಿಕ ಉಡುಗೆಯನ್ನು ಹಾಗೂ ಪುರುಷರು ಬಿಳಿಯ ಬಣ್ಣದ ಉಡುಗೆಯನ್ನು ಧರಿಸಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಸೂಚಿಸಿದೆ.
- ಕಾರ್ಯಕ್ರಮ ಮುಗಿದ ತಕ್ಷಣ ಎಂದಿನಂತೆ ತರಗತಿಗಳಿಗೆ ವಿದ್ಯಾರ್ಥಿಗಳು, ಸಂಶೋಧಕರು, ಅಧ್ಯಾಪಕರುಗಳು ತಪ್ಪದೇ ಹಾಜರಾಗುವುದು.
- ಹಾಜರಾತಿ ಕಡ್ಡಾಯವಾಗಿದ್ದು ಈ ಕಾರ್ಯಕ್ರಮಕ್ಕೆ ಗೈರುಹಾಜರಾದ ಉದ್ಯೋಗಿಗಳ ಮತ್ತು ವಿದ್ಯಾರ್ಥಿಗಳ ಪಟ್ಟಿಯನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವುದು.

(signature) 20/9/2025
ಕುಲಸಚಿವರು
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು

ಇವರಿಗೆ:

1. ನಿರ್ದೇಶಕರು, ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ, ಮಾನಸಗಂಗೋತ್ರಿ, ಮೈಸೂರು
2. ಅಧ್ಯಕ್ಷರು/ನಿರ್ದೇಶಕರು, ಎಲ್ಲಾಸ್ನಾತಕ/ಸ್ನಾತಕೋತ್ತರಅಧ್ಯಯನ ವಿಭಾಗಗಳು, ಮಾ.ಗಂ., ಮೈಸೂರು

ಪ.ತಿ.ನೋ

3. ಎಲ್ಲಾ ಬಟವಾಡೆ ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಟ್ಟ ಕಾಲೇಜುಗಳ ಪ್ರಾಂಶುಪಾಲರು, ಮೈವಿವಿ, ಮೈಸೂರು.
6. ಸಿಸ್ಟಮ್-ಕೋಆರ್ಡಿನೇಟರ್, ಮಾಹಿತಿ ಮತ್ತು ಸಂವಹನ(ಐಸಿಟಿ), ಗಣಕ ವಿಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ – ಇದರ ಸುತ್ತೋಲೆಯನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
7. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
8. ಕುಲಸಚಿವರು (ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
9. ವಿಶೇಷ ಉಪಕುಲಸಚಿವ/ಸಹಾಯಕ ಕುಲಸಚಿವ/ಅಧೀಕ್ಷಕರು, ಮೈವಿವಿ, ಮೈಸೂರು
10. ಕುಲಪತಿ /ಕುಲಸಚಿವ /ಕುಲಸಚಿವ (ಪರೀಕ್ಷಾಂಗ) /ಹಣಕಾಸು ಅಧಿಕಾರಿಯವರ ಆಪ್ತಸಹಾಯಕರು, ಮೈವಿವಿ, ಮೈಸೂರು
11. ಕಛೇರಿ ಪ್ರತಿ.